# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/08/2020-21 ದಿನಾಂಕ : 16/01/2021

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 16/01/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ರಂಗನಾಥ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಪಿ.ಎಂ ಮಲಯಾದ್ರಿ, ತೋಟಗಾರಿಕಾ ಪರಿವೀಕ್ಷಕರು
5. ಶ್ರೀ ಲಕ್ಷ್ಮೀಕಾಂತ್, ಸಹಾಯಕ ಅಭಿಯಂತರರು, ಬೆಸ್ಕಾಂ
6. ಶ್ರೀ ಉದಯ್‌ಕುಮಾರ್, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
7. ಶ್ರೀ ಕೆ.ನಂಜೇಗೌಡ, ತೆರಿಗೆ ಪರಿವೀಕ್ಷಕರು
8. ಕು॥ ಕಾವ್ಯ, ಸಹಾಯಕ ಅಭಿಯಂತರರು
9. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ರಂಗನಾಥ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು**

ಆಲ್‌ಪೈನ್ ಪಿರಮಿಡ್ ಅಪಾರ್ಟ್‌ಮೆಂಟ್ ಎದುರು ನಿರ್ಮಿಸಿರುವ ಆರ್.ಎ ಕೃಷ್ಣ ಅಪಾರ್ಟ್‌ಮೆಂಟ್‌ನ ಒಳಚರಂಡಿ ಸಂಪರ್ಕವನ್ನು ಸಕ್ರಮಗೊಳಿಸಲು, ಕೃಷ್ಣ ದೇವಸ್ಥಾನದ ರಸ್ತೆಯಲ್ಲಿ ಸಿ.ಎಂ.ಸಿ ನೀರಿನ ಪೈಪ್‌ಲೈನ್ ರಸ್ತೆ ಮಟ್ಟಕ್ಕಿಂತ ಮೇಲ್ಬಾಗದಲ್ಲಿರುವುದಾಗಿ, ಲೇಕ್‌ಶೋರ್ ಗಾರ್ಡನ್ 4ನೇ ಅಡ್ಡರಸ್ತೆ, ಸ್ವತ್ತಿನ ಸಂಖ್ಯೆ 05/1ರಲ್ಲಿ ನೀರಿನ ಬಿಲ್ ಪಾವತಿಸುತ್ತಿದ್ದರೂ ನೀರಿನ ಪೂರೈಕೆಯಾಗುತ್ತಿರುವುದಿಲ್ಲ ಹಾಗೂ ಕೆಲವು ಮನೆಗಳು ಮೀಟರ್ ಸಂಪರ್ಕವನ್ನು ಪಡೆಯದಿದ್ದರೂ ನೀರಿನ ಪೂರೈಕೆಯಾಗುತ್ತಿರುತ್ತದೆ, ಎನ್.ಟಿ.ಐ ಲೇಔಟ್‌ನಲ್ಲಿ ಛೇಂಬರ್ ಬ್ಲಾಕ್ ಆಗುತ್ತಿರುವುದರಿಂದ ತಾತ್ಕಾಲಿಕವಾಗಿ ಶುಚಿಗೊಳಿಸಲು ಈ ಹಿಂದಿನ ಸಭೆಯಲ್ಲಿಯೂ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿರುವುದಿಲ್ಲವೆಂದು ದೂರಿದರು.

ಕ್ರಮ: ಸ.ಕಾ.ಅ, ಬಿಡಬ್ಲ್ಯೂ.ಎಸ್.ಎಸ್.ಬಿ

ವಿದ್ಯಾರಣ್ಯಪುರ ವ್ಯಾಪ್ತಿಯಲ್ಲಿ ಕತ್ತರಿಸಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸದೆ ಹಾಗೆಯೇ ಬಿಟ್ಟು ಹೋಗುತ್ತಿರುತ್ತಾರೆ ಹಾಗೂ ವಿರೂಪಾಕ್ಷಪುರದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುತ್ತಿರುವುದಾಗಿ ದೂರು ನೀಡಿದರು.

ಕ್ರಮ : ಸ.ಕಾ.ಅ, ಬೆಸ್ಕಾಂ

ವಿದ್ಯಾರಣ್ಯಪುರ ಮುಖ್ಯ ರಸ್ತೆಯಲ್ಲಿ, ಕೃಷ್ಣ ದೇವಸ್ಥಾನದ ಕೊಳವೆ ಬಾವಿ ಹತ್ತಿರ, ನಾರಾಯಣ ಸ್ಕೂಲ್ ಹತ್ತಿರ ಬೀದಿ ದೀಪಗಳು ಹಾಳಾಗಿರುವುದರಿಂದ ಸರಿಪಡಿಸಲು, ಎನ್.ಟಿ.ಐ ಲೇಔಟ್ ರಾಜೀವ್‌ಗಾಂಧಿನಗರ ದಲ್ಲಿ ಎಲ್.ಇ.ಡಿ ಬಲ್ಬ್‌ಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲವಾದ್ದರಿಂದ ಸರಿಪಡಿಸಲು ಕೋರಿದರು.

ಕ್ರಮ: ಸ.ಕಾ.ಅ, ವಿದ್ಯುತ್

ಹೆಚ್.ಎಂ.ಟಿ ಲೇಔಟ್, ಬಿ.ಇ.ಎಲ್ ಲೇಔಟ್, ದುರ್ಗಾ ಲೇಔಟ್, ಕೆನರಾ ಬ್ಯಾಂಕ್ ಲೇಔಟ್, ಸಪ್ತಗಿರಿ ಲೇಔಟ್, ಗುರುದರ್ಶನ್ ಲೇಔಟ್, ವೆಂಕಟಸ್ವಾಮಪ್ಪ ಲೇಔಟ್ ಹಾಗೂ ಇತರೆ ಕಡೆಗಳಲ್ಲಿ ಒಣತ್ಯಾಜ್ಯ ಸಂಗ್ರಹಣೆ ಸಮರ್ಪಕವಾಗಿರುವುದಿಲ್ಲ, ರಸ್ತೆ ಗುಡಿಸುವಿಕೆ ಕಾರ್ಯ ಸಮರ್ಪಕವಾಗಿರುವುದಿಲ್ಲ ಹಾಗೂ ಬ್ಲಾಕ್‌ಸ್ಪಾಟ್‌ಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಬ್ಲಾಕ್‌ಸ್ಪಾಟ್‌ಗಳ ಸಂಖ್ಯೆ ಕಡಿಮೆ ಮಾಡಲು ಕೋರಿದರು.

ಕ್ರಮ: ಸ.ಕಾ.ಅ, ಘ.ತ್ಯಾ.ನಿ

ಕೆನರಾ ಬ್ಯಾಂಕ್ ಬಡಾವಣೆಯ ರಾಜಕಾಲುವೆಯಲ್ಲಿ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಲು ಕೋರಿದರು.

ಕ್ರಮ: ಸ.ಕಾ.ಅ, ಬೃನೀ.ಗಾ

ದೊಡ್ಡಬೊಮ್ಮಸಂದ್ರ ಕೆರೆಯನ್ನು ಶುಚಿಗೊಳಿಸಲು ಕೋರಿದರು.

ಕ್ರಮ: ಕೆರೆ ಅಭಿವೃದ್ಧಿ ಪ್ರಾಧಿಕಾರ

**ನೋಡೆಲ್ ಅಧಿಕಾರಿ:** ಶ್ರೀ ಶಿವಕುಮಾರ್ ಗೌಡರ್ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

Assistant Executive Engineer
Vidyaranyapura Sub-Division
BBMP, Bangalore - 97

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.